ವಿ-330
ತ್ರಿ-10 - ರಂಜಿತ್ ಕುಮಾರ್

## ಮಾನ್ಯ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಇವರ ನಿಯಮ 330ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ:**

ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ 2023-24ನೇ ಸಾಲಿನಿಂದ ಹೊಸದಾಗಿ ಚಾಮರಾಜನಗರ, ಹಾಸನ, ಮಂಡ್ಯ ವಿಶ್ವವಿದ್ಯಾಲಯಗಳನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿರುವುದು ಸರಿಯಷ್ಟೇ. ಹೊಸದಾಗಿ ಮೂರು ವಿಶ್ವವಿದ್ಯಾನಿಲಯಗಳು ಪ್ರಾರಂಭಗೊಂಡ ಸಾಲಿನಿಂದ ಸದರಿ ವಿ.ವಿ.ಯ ವ್ಯಾಪ್ತಿಯಲ್ಲಿನ ವಿದ್ಯಾರ್ಥಿಗಳು ತಾವು ಇಚ್ಛಿಸಿದ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡಲು ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಪ್ರವೇಶ ಪಡೆಯಲು ನಿಯಮಗಳ ತೊಡಕುಗಳಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಸರ್ಕಾರದ ಉತ್ತರ:**

ಮೈಸೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಪ್ರೋಗ್ರಾಂಗಳ ಪ್ರವೇಶಾತಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಇರುವ ಸಂಖ್ಯಾಮಿತಿಗೆ ಮೈಸೂರು ವಿಶ್ವವಿದ್ಯಾಲಯದ ಹೊರಗಿನ, ಕರ್ನಾಟಕ ರಾಜ್ಯದ ಒಳಗಿರುವ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಶೇ.10ರಷ್ಟು ಸೀಟುಗಳು ಮತ್ತು ಕರ್ನಾಟಕ ರಾಜ್ಯದ ಹೊರಗಿನ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಶೇ.10ರಷ್ಟು ಸೀಟುಗಳನ್ನು ಹೆಚ್ಚುವರಿಯಾಗಿ ಪ್ರವೇಶಾತಿಗೆ ಅವಕಾಶ ಕಲ್ಪಿಸಿದೆ.

ಮಾನ್ಯ ವಿಧಾನಪರಿಷತ್ತಿನ ಸದಸ್ಯರು ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಮುಂದಿನ ವರ್ಷದಲ್ಲಿ ಚಾಮರಾಜನಗರ, ಹಾಸನ, ಮಂಡ್ಯ, ಈ ವಿಶ್ವವಿದ್ಯಾಲಯಗಳಿಂದ ಬರುವ ವಿದ್ಯಾರ್ಥಿಗಳಿಗೆ ಸೀಟುಗಳನ್ನು ಹೆಚ್ಚುವರಿಯಾಗಿ ನೀಡಿ ಪ್ರವೇಶಾತಿಯನ್ನು ನೀಡಬಹುದಾಗಿರುತ್ತದೆ.

**ಸಂಖ್ಯೆ: ಇಡಿ 84 ಯುಎಂವಿ 2022**

**(ಡಾ: ಅಶ್ವತ್ಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು